ಪ್ರಸ್ತಾವವು ಅಂಗೀಕರಿಸಲ್ಪಟ್ಟಿದೆ.

ಪ್ರಥಮ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಅಂಗವಾಗಿದೆ.

ಅಧ್ಯಕ್ಷರು: ಮಾನ್ಯ ಸಚಿವರು ಅಂಗೀಕಾರ ಪ್ರಸ್ತಾವವನ್ನು ಮಂಡಿಸಬಹುದು.

ಡಾ. ವಿ.ಎಸ್. ಆಚಾರ್ಯ (ವೈದ್ಯಕೀಯ ಶಿಕ್ಷಣ ಸಚಿವರು): (ಕಂದಾಯ ಸಚಿವರ ಪರವಾಗಿ): ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ಮೂಲಗೇಣಿ ಅಥವಾ ಒಳಮೂಲಗೇಣಿ ಗೇಣಿದಾರರಿಗೆ ಮಾಲೀಕತ್ವವನ್ನು ಪ್ರಧಾನ ಮಾಡುವ ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವವನ್ನು ಮಂಡಿಸಲಾಗಿದೆ. ಅದನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

2011ನೇ ಸಾಲಿನ ಕರ್ನಾಟಕ ಮೂಲಗೇಣಿ ಅಥವಾ ಒಳಮೂಲಗೇಣಿ ಗೇಣಿದಾರರಿಗೆ ಮಾಲೀಕತ್ವವನ್ನು ಪ್ರಧಾನ ಮಾಡುವ ವಿಧೇಯಕವನ್ನು ಈ ಸಭೆಯು ಅಂಗೀಕರಿಸಬೇಕು.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು.

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವವು ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ.

(ಆ) ಕರ್ನಾಟಕ ಪೌರ ನಿಗಮಗಳ (ತಿದ್ದುಪಡಿ) ವಿಧೇಯಕ, 2011

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲಮಂಡಲಿ ಸಚಿವರು): ಈ NURM ಯೋಜನೆಯಡಿ ಯಾವ್ಯಾವ ನಗರಗಳಲ್ಲಿ 3 ಲಕ್ಷಕ್ಕಿಂತ ಜಾಸ್ತಿ ಜನಸಂಖ್ಯೆ ಇದೆ ಅಲ್ಲಿ ನಾಗರೀಕರ

ಪಾಲುದಾರಿಕೆ ಇರಬೇಕು, ಯಾವುದೇ ಅಭಿವೃದ್ಧಿ ಕಾರ್ಯಗಳಲ್ಲಿ ಮತ್ತು ಆಡಳಿತದಲ್ಲಿ ಎಂದು ಒಂದಷ್ಟು ಸುಧಾರಣಾ ಕ್ರಮಗಳನ್ನು ನಿಶ್ಚಯ ಮಾಡಲಾಗಿದೆ. ಆ ದೃಷ್ಟಿಯಿಂದ 2007ನೇ ಇಸವಿಯಲ್ಲಿಯೇ ನಮ್ಮ ಸರ್ಕಾರ ಭಾರತ ಸರ್ಕಾರದ ಜೊತೆ ಒಪ್ಪಂದ ಮಾಡಿಕೊಂಡಿತ್ತು. ಆ ಆಧಾರದ ಮೇಲೆ ನಾವು ಎಲ್ಲಾ ವಾರ್ಡ್‌ಗಳಲ್ಲಿ ವಾರ್ಡ್ ಒಳಗಡೆ ಪ್ರದೇಶ ಸಭಾ ಮಾಡಬೇಕು ಮತ್ತು ವಾರ್ಡ್ ಮಟ್ಟದಲ್ಲಿ ವಾರ್ಡ್ ಸಮಿತಿಗಳನ್ನು ಮಾಡಬೇಕೆಂದು ನಾವು ಒಪ್ಪಿಕೊಂಡಿದ್ದೇವೆ. ಪ್ರದೇಶ ಸಭಾ ಮತ್ತು ವಾರ್ಡ್ ಸಮಿತಿಗಳಿಗೆ ಸದಸ್ಯರನ್ನು ನೇಮಕ ಮಾಡುವುದು, ಏನೇನು ಕಾರ್ಯಗಳನ್ನು, ಜವಾಬ್ದಾರಿಗಳನ್ನು ಕೊಡಬೇಕೆನ್ನುವುದೂ ಕೂಡ ಇದರಲ್ಲಿ ಅಡಕವಾಗಿದೆ. ಒಟ್ಟಾರೆ ನಾಗರೀಕರು ಇದರಲ್ಲಿ ಭಾಗವಹಿಸುವುದಕ್ಕೋಸ್ಕರ ಒಂದು system ನಲ್ಲಿ ಅವಕಾಶ ಕೊಡಲಿಕ್ಕೋಸ್ಕರ ಈ ಬಿಲ್ ಅನ್ನು ತಿದ್ದುಪಡಿಯನ್ನು ತಂದಿದ್ದೇವೆ. ದಯವಿಟ್ಟು ಇದನ್ನು ಪರ್ಯಾಲೋಚಿಸಬೇಕೆಂದು ಕೇಳಿಕೊಳ್ಳುತ್ತೇನೆ.

ಅಧ್ಯಕ್ಷರು: ಪರ್ಯಾಲೋಚನಾ ಪ್ರಸ್ತಾವವನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

2011ನೇ ಸಾಲಿನ ಕರ್ನಾಟಕ ಪೌರನಿಗಮಗಳ (ತಿದ್ದುಪಡಿ) ವಿಧೇಯಕವನ್ನು ಈ ಸಭೆಯು ಪರ್ಯಾಲೋಚಿಸುತ್ತದೆ ಎಂಬ ವಿಷಯ ಸಭೆಯ ಮುಂದೆ ಇದೆ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು.

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.

ಪ್ರಸಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸಾವಕ್ಕೆ ಅನುಮೋದನೆ ದೊರಕಿದೆ.

ಈಗ ವಿಧೇಯಕವನ್ನು ಖಂಡ ಖಂಡವಾಗಿ ಮತಕ್ಕೆ ಹಾಕುತ್ತೇನೆ.

2ನೇ ಖಂಡ ವಿಧೇಯಕದ ಅಂಗವಾಗಿರಬೇಕು ಎನ್ನುವುದು ಸಭೆಯ ಮುಂದಿರುವ ವಿಷಯ

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು.

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವವಕ್ಕೆ ಒಪ್ಪಿಗೆ ದೊರಕಿದೆ

2ನೇ ಖಂಡ ವಿಧೇಯಕದ ಅಂಗವಾಯಿತು

ಮೊದಲನೇ ಖಂಡ, ಹೆಸರು ಮತ್ತು ಅವತರಣಿಕೆ

ಮೊದಲನೆ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಭಾಗವಾಗಬೇಕೆಂದು ಸಭೆಯ ಮುಂದಿರುವ ವಿಷಯ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು.

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.

ಪ್ರಸಾವ್ತವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವವು ಅಂಗೀಕರಿಸಲ್ಪಟ್ಟಿದೆ.

ಪ್ರಥಮ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಅಂಗವಾಗಿದೆ.

ಅಧ್ಯಕ್ಷರು: ಮಾನ್ಯ ಸಚಿವರು ಈಗ ಅಂಗೀಕಾರ ಪ್ರಸ್ತಾವವನ್ನು ಮಂಡಿಸಬಹುದು.

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲಮಂಡಲಿ ಸಚಿವರು): ಮಾನ್ಯ ಅಧ್ಯಕ್ಷರೆ, ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುತ್ತೇನೆ.

ಅಧ್ಯಕ್ಷರು: ಪ್ರಸ್ತಾವವನ್ನು ಮಂಡಿಸಲಾಗಿದೆ.

ಅದನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

2011ನೇ ಸಾಲಿನ ಕರ್ನಾಟಕ ಪೌರನಿಗಮಗಳ (ತಿದ್ದುಪಡಿ) ವಿಧೇಯಕವನ್ನು ಈ ಸಭೆಯು ಅಂಗೀಕರಿಸಬೇಕು

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು.

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ.

ಇ) **2011ನೇ ಸಾಲಿನ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ವ್ಯವಸ್ಥೆ (ತಿದ್ದುಪಡಿ) ವಿಧೇಯಕ:**

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲಮಂಡಲಿ ಸಚಿವರು): ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ವ್ಯವಸ್ಥೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುತ್ತೇನೆ. ಹಿಂದೆ ಇದೇ ಒಂದು ತಿದ್ದುಪಡಿ ನಮ್ಮ ಸದನದಲ್ಲಿ ಆಗಿತ್ತು. Rain water harvesting ಎಂದೇನು ಹೇಳುತ್ತೇವೆ, ಮಳೆ ನೀರಿನ ಕೊಯ್ಲು ಆ ಒಂದು ಬಿಲ್ ಬಂದ ಒಂಬತ್ತು ತಿಂಗಳೊಳಗೆ ಅನುಷ್ಠಾನಗೊಳ್ಳಬೇಕಾಗಿತ್ತು. ಆದರೆ, ಅನೇಕ ಕಾರಣಾಂತರಗಳಿಂದ ಆ ಕೆಲಸ ಇನ್ನೂ ಆಗಿಲ್ಲ. ಹೀಗಾಗಿ ಈ ಒಂದು ತಿದ್ದುಪಡಿಯನ್ನು ತರಬೇಕಾಗಿದೆ. ಹಿಂದೆ ಏನು ನಿಗದಿಯಾಗಿತ್ತೋ ಆ ಒಂದು ದಿನಾಂಕ ಮೀರಿ ಅದು ಇನ್ನೂ ಕಾರ್ಯಗತವಾಗಿಲ್ಲದಿರುವುದರಿಂದ ಒಂದು ತಿದ್ದುಪಡಿಯನ್ನು ತಂದು ಮುಂದೆ ಮತ್ತೊಂದು ದಿನಾಂಕವನ್ನು ನಿಶ್ಚಯ ಮಾಡಲಿಕ್ಕೋಸ್ಕರ ಈ ತಿದ್ದುಪಡಿ ತರುತ್ತಿದ್ದೇವೆ. ಇಡೀ ಬೆಂಗಳೂರಿನಲ್ಲಿ BWSSB ವ್ಯಾಪ್ತಿಯಲ್ಲಿ ಮಳೆ ನೀರಿನ ಕೊಯ್ಲನ್ನು ಕಡ್ಡಾಯ ಮಾಡಲಿಕ್ಕಾಗಿ ಈ ಒಂದು ತಿದ್ದುಪಡಿಯನ್ನು ತರುತ್ತಿದ್ದೇವೆ.

ಅಧ್ಯಕ್ಷರು: ಪರ್ಯಾಲೋಚನಾ ಪ್ರಸ್ತಾವವನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.